ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 26/12/2019

# ಖಾದರ್ ವಿರುದ್ಧ ಮತ್ತೊಂದು ದೂರು

ಉ.ವಾ 26/12/19

ಬಂಟ್ವಾಳ: ಪೌರತ್ವ ತಿದ್ದುಪಡಿ ಕಾಯ್ದೆಯ ವಿರುದ್ಧ ಉಳ್ಳಾಲ ಶಾಸಕ ಯು.ಟಿ.ಖಾದರ್ ಅವರು ರಾಜ್ಯಕ್ಕೆ ಬೆಂಕಿ ಹಚ್ಚುವ ಪ್ರಚೋದನಕಾರಿ ಹೇಳಿಕೆ ನೀಡಿ ಸಮಾಜದ ಶಾಂತಿ ಕೆಡಿಸಿದ್ದು, ಅವರ ವಿರುದ್ಧ ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಬಂಟ್ವಾಳ ಹಿಂದೂ ಜಾಗರಣ ವೇದಿಕೆ ಬಂಟ್ವಾಳ ನಗರ ಪೊಲೀಸ್ ಠಾಣೆಗೆ ದೂರು ನೀಡಿದೆ. ಶಾಸಕರ ಹೇಳಿಕೆಯಿಂದ ಪ್ರೇರಿತರಾಗಿ ಕಿಡಿಗೇಡಿಗಳು ಪ್ರತಿಭಟನೆಯ ನೆಪದಲ್ಲಿ ಬೆಂಕಿ ಹಚ್ಚುವ ಪ್ರಯತ್ನ ಮಾಡಿದ್ದಾರೆ. ಅಪಾರ ಪ್ರಮಾಣದಲ್ಲಿ ಸಾರ್ವಜನಿಕ ಸೊತ್ತುಗಳಿಗೆ ಹಾನಿಯಾಗಿದೆ ಎಂದು ದೂರಿನಲ್ಲಿ ಆಪಾದಿಸಲಾಗಿದೆ. ಗಲಭೆಯಲ್ಲಿ ಮೃತಪಟ್ಟವರ ಕುಟುಂಬಕ್ಕೆ ಸರಕಾರ 10 ಲಕ್ಷ ರೂ.ಪರಿಹಾರ ಘೋಷಿಸಿರುವುದು ಸರಿಯಲ್ಲ, ಇದರ ಪುನರ್ ವಿಮರ್ಶೆ ನಡೆಸಬೇಕು ಎಂದೂ ವೇದಿಕೆ ಒತ್ತಾಯಿಸಿದೆ.